63

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಂ.ನಾಗರಾಜು ರವರು ನಿಯಮ 330ನೇ ಸೂಚನೆಗೆ ಉತ್ತರ:

**ಸೂಚನೆ:**

ಕರ್ನಾಟಕ ರಾಜ್ಯದಲ್ಲಿ ಅದರಲ್ಲೂ ವಿಶೇಷವಾಗಿ ಬೆಂಗಳೂರಿನಲ್ಲಿ ವ್ಯಾಪಾರ, ಉದ್ಯೋಗ ಮತ್ತು ಶೈಕ್ಷಣಿಕ ವೀಸಾದಡಿ ವಿದೇಶದಿಂದ ರಾಜ್ಯ ಹಾಗೂ ಬೆಂಗಳೂರು ನಗರದಲ್ಲಿ ಅಕ್ರಮವಾಗಿ ನೆಲೆಸಿಕೊಂಡು ಡ್ರಗ್ಸ್ ಮತ್ತು ಇನ್ನಿತರೆ ಅಕ್ರಮ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರುವ ವೀಸಾ ಅವಧಿ ಮೀರಿ ವಾಸಿಸುತ್ತಿರುವ ವಿದೇಶಿಗರ ವಿರುದ್ಧ ಹಾಗೂ ಬೆಂಗಳೂರು ಮತ್ತು ರಾಜ್ಯದ ಇತರೆ ಜಿಲ್ಲೆಗಳಲ್ಲಿ ದಿನದಿಂದ ದಿನಕ್ಕೆ ಡ್ರಗ್ಸ್ ಮಾರಾಟ ಮಾಡುವವರ ಹಾಗೂ ಸೇವನೆ ಮಾಡುವವರ ಸಂಖ್ಯೆ ಹೆಚ್ಚಾಗುತ್ತಿದ್ದು, ಈ ಅಪರಾಧಗಳ ವಿರುದ್ಧ ಗೃಹ ಇಲಾಖೆ ಕೈಗೊಂಡ ಕ್ರಮಗಳ ಕುರಿತು.

**ಉತ್ತರ:**

ರಾಜ್ಯದಲ್ಲಿ ವೀಸಾ ಅವಧಿ ಮೀರಿ (Over Stay) 1683 ವಿದೇಶಿಯರು ವಾಸಿಸುತ್ತಿದ್ದು, 468 ಪ್ರಕರಣಗಳು ದಾಖಲಾಗಿದ್ದು, ಒಟ್ಟು 701 ವಿದೇಶಿಯರು ದಸ್ತಗಿರಿಯಾಗಿರುತ್ತಾರೆ. ಬೆಂಗಳೂರು ನಗರದಲ್ಲಿ ವೀಸಾ ಅವಧಿ ಮೀರಿ (Over Stay) 1505 ವಿದೇಶಿಯರು ವಾಸಿಸುತ್ತಿದ್ದು, 428 ಪ್ರಕರಣಗಳು ದಾಖಲಾಗಿದ್ದು, ಒಟ್ಟು 632 ವಿದೇಶಿಯರು ದಸ್ತಗಿರಿಯಾಗಿರುತ್ತಾರೆ.

ರಾಜ್ಯದಲ್ಲಿ ವೀಸಾ ಅವಧಿ ಮೀರಿ ವಾಸವಿರುವ ವಿದೇಶಿಯರ ಮೇಲೆ ಒಟ್ಟು 468 ಪ್ರಕರಣಗಳು ದಾಖಲಾಗಿರುತ್ತದೆ. ಅವುಗಳಲ್ಲಿ 227 ಎನ್.ಡಿ.ಪಿ.ಎಸ್. (ಮಾದಕ ವಸ್ತು) ಪ್ರಕರಣಗಳಿದ್ದು, ಒಟ್ಟು 308 ವಿದೇಶಿಯರನ್ನು ದಸ್ತಗಿರಿ ಮಾಡಲಾಗಿರುತ್ತದೆ. ವಿವರ ಈ ಕೆಳಗಿನಂತಿದೆ:-

| ಕ್ರ. ಸಂ. | ನಗರ/ಜಿಲ್ಲೆ | ವೀಸಾ ಅವಧಿ ಮೀರಿ ವಾಸವಿರುವ ವಿದೇಶಿಯರ ವಿರುದ್ಧ ದಾಖಲಾದ ಎನ್ ಡಿಪಿಎಸ್ ಪ್ರಕರಣಗಳ ಸಂಖ್ಯೆ | ಎನ್‌ಡಿಪಿಎಸ್ ಪ್ರಕರಣಗಳಲ್ಲಿ ದಸ್ತಗಿರಿಯಾಗಿರುವ ವಿದೇಶಿಯರ ಸಂಖ್ಯೆ |
|---|---|---|---|
| 1. | ಬೆಂಗಳೂರು ನಗರ | 223 | 302 |
| 2. | ಬೆಂಗಳೂರು ಜಿಲ್ಲೆ | 03 | 05 |
| 3. | ಹುಬ್ಬಳ್ಳಿ-ಧಾರವಾಡ ನಗರ | 01 | 01 |
| | **ಒಟ್ಟು** | **227** | **308** |

ಸರ್ಕಾರವು ಮಾದಕವಸ್ತು ಮಾರಾಟ ಮತ್ತು ಸೇವನೆ ತಡೆಗಟ್ಟಲು ತೆಗೆದುಕೊಂಡ ಕ್ರಮಗಳು ಕೆಳಕಂಡಂತಿದೆ:-

1. ವಿದೇಶಿಯರು ಹೆಚ್ಚಾಗಿ ಸೇರುವ ಪ್ರತಿಷ್ಠಿತ ಹೋಟೆಲ್, ಪಬ್ ಇತ್ಯಾದಿಗಳಲ್ಲಿ ರಾತ್ರಿ ಪಾರ್ಟಿಗಳನ್ನು ಆಯೋಜಿಸಿ ಅಲ್ಲಿರುವ ವಿದೇಶಿಯರಿಗೆ ಮಾದಕ ವಸ್ತುಗಳನ್ನು ಸರಬರಾಜು ಮಾಡುತ್ತಿದ್ದ ವ್ಯವಸ್ಥಿತ ಜಾಲವನ್ನು ಪತ್ತೆ ಮಾಡಿ ಅವರನ್ನು ದಸ್ತಗಿರಿ ಮಾಡಿ ಅವರ ವಿರುದ್ಧ ಕ್ರಮಕೈಗೊಳ್ಳಲಾಗಿದೆ.

2. ಶಾಲಾ-ಕಾಲೇಜುಗಳ ಹತ್ತಿರ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಮಾದಕ ವಸ್ತುಗಳನ್ನು ಮಾರಾಟ ಮಾಡುತ್ತಿರುವ ಹಾಗೂ ಮಾದಕ ವಸ್ತು ಸೇವನೆ ಮಾಡುವವರ ವಿರುದ್ಧ ತ್ವರಿತವಾಗಿ ಕಠಿಣ ಕ್ರಮ ಕೈಗೊಳ್ಳಲಾಗಿದೆ.

3. ಠಾಣಾ ಸರಹದ್ದುಗಳಲ್ಲಿ ಹೊಯ್ಸಳ ಚೀತಾ ಅಧಿಕಾರಿ ಮತ್ತು ಸಿಬ್ಬಂದಿಗಳು ಗಸ್ತಿನಲ್ಲಿರುವ ಸಮಯದಲ್ಲಿ ಎಲ್ಲಾ ಕಡೆ ಸೂಕ್ಷ್ಮವಾಗಿ ಗಮನಿಸಿ ಅಪರಿಚಿತ ವಿದೇಶಿಯರ ಮಾಹಿತಿ ಸಂಗ್ರಹಿಸಿ ಮಾದಕದ್ರವ್ಯ ಪದಾರ್ಥಗಳ ವಹಿವಾಟನ್ನು ತಡೆಗಟ್ಟಲು ಹಾಗೂ ಪತ್ತೆ ಮಾಡಲಾಗುತ್ತಿರುತ್ತದೆ.

4. ರಾಜ್ಯಕ್ಕೆ ಮಾದಕ ವಸ್ತುಗಳು ಸರಬರಾಜು ಆಗುವ ಮಾರ್ಗಗಳ ಮೇಲೆ ತೀವ್ರ ನಿಗಾವಣೆ ಇಟ್ಟು ಕಟ್ಟುನಿಟ್ಟಾದ ಕಾನೂನು ಕ್ರಮಗಳನ್ನು ಜರುಗಿಸಲಾಗಿದೆ. ಡಾರ್ಕ್ನೆಟ್ (Darknet) ಮುಖಾಂತರ ಡ್ರಗ್ಸ್ ಸರಬರಾಜು ಮಾಡುತ್ತಿದ್ದ ಜಾಲವನ್ನು ಪತ್ತೆ ಮಾಡಿ ಕಾನೂನು ಕ್ರಮಕೈಗೊಳ್ಳಲಾಗಿರುತ್ತದೆ. ಅಲ್ಲದೆ ವಿದೇಶಗಳಿಂದ ಪೋಸ್ಟಲ್ / ಕೊರಿಯರ್ಸ್ ಮುಖಾಂತರ ನಗರಕ್ಕೆ ಡ್ರಗ್ಸ್ ಸರಬರಾಜು ಮಾಡುತ್ತಿದ್ದ ಜಾಲವನ್ನು ಸಹ ಭೇದಿಸಲಾಗಿದೆ.

5. ಅಲ್ಲದೆ ಠಾಣಾ ಸರಹದ್ದಿನ ಬೀಟ್ ಮತ್ತು ಸಬ್-ಬೀಟ್‌ಗಳಲ್ಲಿ ಆಗ್ಗಿಂದಾಗ್ಗೆ ಸಭೆಯನ್ನು ನಡೆಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ.

6. ಬೆಂಗಳೂರು ನಗರದಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ಮಾದಕ ವಸ್ತು ಮಾರಾಟ ಮತ್ತು ಸೇವನೆ ಮಾಡುವವರ ವಿರುದ್ಧ ದೂರು ನೀಡಲು ಟೋಲ್ ಫ್ರೀ ಸಂಖ್ಯೆ 1908ಕ್ಕೆ ಸಂಪರ್ಕಿಸಿ ಪೊಲೀಸರಿಗೆ ಮಾಹಿತಿ ನೀಡುವ ಯೋಜನೆಯನ್ನು ಪ್ರಾರಂಭಿಸಲಾಗಿದೆ.

7. ರಾಜ್ಯದಲ್ಲಿ ಡ್ರಗ್ಸ್ ಅಕ್ರಮಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ಸಲುವಾಗಿ NCB, DRI, Customs, Railway, Education ಇಲಾಖೆಗಳ ಅಧಿಕಾರಿಗಳ ಸಮನ್ವಯ ಸಭೆಯನ್ನು ನಡೆಸಲಾಗಿದೆ.

8. ವಿದೇಶಿಯರು ವಿಶೇಷವಾಗಿ ನೈಜೀರಿಯನ್ ಪ್ರಜೆಗಳು ಮಾದಕ ವಸ್ತುಗಳ ಮಾರಾಟ/ಸೇವನೆಯ ಪ್ರಕರಣಗಳಲ್ಲಿ ಆರೋಪಿಗಳಿಗೆ ಯಾವ ಮೂಲಗಳಿಂದ ಮಾದಕ ವಸ್ತುಗಳು ಸರಬರಾಜಾಗುತ್ತಿವೆ ಎಂಬುದರ ಬಗ್ಗೆ ಸಂಪೂರ್ಣ ಮಾಹಿತಿ ಸಂಗ್ರಹಿಸಿ, ಇಂತಹ ಕೃತ್ಯಗಳಲ್ಲಿ ತೊಡಗಿರುವ ವಿದೇಶಿಯರನ್ನು ದಸ್ತಗಿರಿ ಮಾಡಿ ಅವರುಗಳ ಪಾಸ್‌ಪೋರ್ಟ್ ಗಳನ್ನು ಮುಟ್ಟುಗೋಲು ಹಾಕಿಕೊಂಡು ಸದರಿಯವರ ಗಡಿಪಾರಿಗೆ ಕ್ರಮಕೈಗೊಳ್ಳಲಾಗುತ್ತಿದೆ. ಅಂತಹವರ ವಿರುದ್ಧ ವಿಶೇಷ ಕಾರ್ಯಾಚರಣೆಗಳನ್ನು ನಡೆಸಿ ಕಠಿಣ ಕಾನೂನಿನ ಕ್ರಮಕೈಗೊಳ್ಳಲಾಗಿದೆ.

9. ಮಾದಕ ವಸ್ತುಗಳ ಅಕ್ರಮ ಸಾಗಾಣಿಕೆ ಮತ್ತು ಮಾರಾಟ ತಡೆಗಟ್ಟುವ ಸಲುವಾಗಿ, ಠಾಣಾ ಮಟ್ಟದಲ್ಲಿ ಗೌಪ್ಯ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ. ಮಾದಕದ್ರವ್ಯ (ಡ್ರಗ್ಸ್) ಹಾವಳಿಯನ್ನು ತಡೆಗಟ್ಟಲು ಸೂಕ್ತ ನಿಗಾವಹಿಸಿ ಮಾದಕ ದ್ರವ್ಯಗಳ ಮಾರಾಟ ಮತ್ತು ಸೇವಿಸುವವರ ಬಗ್ಗೆ ಮಾಹಿತಿ ಸಂಗ್ರಹಿಸಲಾಗುತ್ತಿದೆ. ಈ ಬಗ್ಗೆ ಬಾತ್ಮಿದಾರರಿಗೂ ಸಹ ಮಾಹಿತಿಯನ್ನು ನೀಡುವಂತೆ ಸೂಚಿಸಲಾಗಿರುತ್ತದೆ. ಅಧಿಕಾರಿ ಸಿಬ್ಬಂದಿಗಳಿಗೆ ಮಾದಕ ದ್ರವ್ಯಗಳ (ಡ್ರಗ್ಸ್) ಮಾರಾಟ ಮತ್ತು ಮಾದಕ ದ್ರವ್ಯ ಸೇವಿಸುವವರ ಬಗ್ಗೆ ಮಾಹಿತಿ ಸಂಗ್ರಹಿಸುವಂತೆ ಸೂಕ್ತ ತಿಳುವಳಿಕೆ ನೀಡಿ ಕರ್ತವ್ಯಕ್ಕೆ ನೇಮಕ ಮಾಡಲಾಗುತ್ತಿದೆ.

10. ಜಿಲ್ಲಾ ವ್ಯಾಪ್ತಿಗಳಲ್ಲಿ ಸೆನ್ ಅಪರಾಧ ಪೊಲೀಸ್ ಠಾಣೆಗಳಲ್ಲಿ ಈ ಸಂಬಂಧ ವಿಶೇಷ ಪಡೆ ರಚಿಸಿಕೊಂಡು ಆ ಮೂಲಕ ದಾಳಿ ನಡೆಸಿ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ.

11. ವಿದೇಶಿಯರು ಹೆಚ್ಚಾಗಿ ಸೇರುವ ಸ್ಥಳಗಳಾದ ಬಾರ್ ಮತ್ತು ರೆಸ್ಟೋರೆಂಟ್, ಕಾಫಿ-ಡೇ, ಪಬ್, ಡ್ಯಾನ್ಸ್, ಬಾರ್, ಶಾಲಾ-ಕಾಲೇಜು ಆವರಣ, ಬಸ್ ನಿಲ್ದಾಣ ಹಾಗೂ ಇನ್ನಿತರ ಪ್ರದೇಶಗಳಲ್ಲಿ ಮಾದಕ ದ್ರವ್ಯ ವಸ್ತುಗಳನ್ನು ಮಾರಾಟ ಮಾಡುತ್ತಿರುವ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ ಕಾನೂನಿನ ರೀತಿ ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗುತ್ತಿದೆ. ಸಾರ್ವಜನಿಕರ ಗಮನ ಸೆಳೆಯಲು ಬ್ಯಾನರ್, ವಿದ್ಯುನ್ಮಾನ ಜಾಗೃತಿ ಫಲಕಗಳು ಹಾಗೂ ಪೋಸ್ಟರ್‌ಗಳನ್ನು ಜನಸಂದಣಿ ಇರುವ ಸ್ಥಳಗಳಲ್ಲಿ ಪ್ರದರ್ಶಿಸಿ, ಕರಪತ್ರ ಹಂಚಲಾಗುತ್ತಿದೆ. ಜೊತೆಗೆ ಕಿರುಚಿತ್ರಗಳ ಮೂಲಕ ಅರಿವು ಮೂಡಿಸುವ ಕಾರ್ಯ ಮಾಡಲಾಗುತ್ತಿದೆ.

12. ಜಿಲ್ಲಾ ಮಾದಕವಸ್ತು ಸಮನ್ವಯ NCORD ಸಮಿತಿ ಸಭೆಯು ನಡೆಸಿರುವ ಸಭೆಗಳ ವರದಿಯನ್ನು ಸಲ್ಲಿಸಿಕೊಂಡು NCORD ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಲಾಗಿದೆ.

13. Youth Services, Karnataka Athletics Association and NGOs ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗಳ ಸಹಯೋಗದೊಂದಿಗೆ Walk and Run ಮತ್ತು ಸೈಕಲ್ ಜಾಥಾ/ ಬೀದಿ ನಾಟಕ ಪ್ರದರ್ಶನಗಳ ಮೂಲಕ ನಿರಂತರವಾಗಿ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.

14. ಸಾರ್ವಜನಿಕ ಸಭೆ, ಮೆರವಣಿಗೆಗಳನ್ನು ನಡೆಸುವುದರ ಮೂಲಕ ವ್ಯಾಪಕ ಪ್ರಚಾರ ಕೈಗೊಂಡು ಸಾರ್ವಜನಿಕರಲ್ಲಿ ಮಾದಕ ವಸ್ತುಗಳ ಸೇವನೆ ವಿರುದ್ಧ ಜಾಗೃತಿ ಮೂಡಿಸಲು ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ.

ಸಂಖ್ಯೆ: ಹೆಚ್‌ಡಿ 118 ಪಿಎಂಎಸ್ 2025

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು